(ಸದನವು ರಾತ್ರಿ 7 ಗಂಟೆ 56 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ 5ನೇ ಏಪ್ರಿಲ್ ಮಾಹೆ 2006ರ ಬುಧವಾರದಂದು ಬೆಳಿಗ್ಗೆ 10–00 ಗಂಟೆಗೆ ಸೇರಲು ನಿಶ್ಚಯಿಸಿತು)

188 (173) ಶ್ರೀ ಅಪ್ಪ ಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣ್ಣ ಶೆಟ್ಟಿ (ಬಿಜಾಪುರ) ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮಾನ್ಯ ಮುಖ್ಯ ಮಂತ್ರಿಗಳು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ವಿಜಾಪುರ ನಗರದಲ್ಲಿ ಇತ್ತೀಚೆಗೆ ರಸ್ತೆ ಅತಿಕ್ರಮಣವನ್ನು ತೆರವುಗೊಳಿಸಿ ರಸ್ತೆ ಅಗಲೀಕರಣ ಕಾರ್ಯ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ವಿಜಾಪುರ ನಗರದಲ್ಲಿ ರಸ್ತೆ ಅಗಲೀಕರಣ ನಡೆದ ಸ್ಥಳಗಳಲ್ಲಿ ರಸ್ತೆ ದುರಸ್ಥಿ ಹಾಗೂ ಕಾಲುದಾರಿ (Foot Path) ನಿರ್ಮಾಣ ಕಾಮಗಾರಿಗಳಿಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಲಾಗುವುದೇ;

ಇ. ಎಷ್ಟು ಅನುದಾನ ಬಿಡುಗಡೆ ಮಾಡಲಾಗುವುದು;

ಈ. ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮಾನ್ಯ ಮುಖ್ಯ ಮಂತ್ರಿಗಳು)

ಅ. ಹೌದು

ಆ. ಈ ಕಾರ್ಯವನ್ನು ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆ ತನ್ನ ಸಂಪನ್ಮೂಲಗಳಿಂದ ಕೈಗೊಳ್ಳಬೇಕಾಗುತ್ತದೆ.

ಇ. ಉದ್ಭವಿಸುವುದಿಲ್ಲ.

ಈ. ಉದ್ಭವಿಸುವುದಿಲ್ಲ.

174: ಶ್ರೀ ಅಪ್ಪ ಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣ್ಣ ಶೆಟ್ಟಿ (ಬಿಜಾಪುರ) ಶ್ರೀ ಬಿ.ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಜವಳಿ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಬಿಜಾಪುರ ನಗರವು ಜಿಲ್ಲಾ ಕೇಂದ್ರವಾಗಿದ್ದು, ರಾಷ್ಟ್ರೀಯ ಅಂತರ್ ರಾಷ್ಟ್ರೀಯ ಪ್ರೇಕ್ಷಣೀಯ ಪ್ರವಾಸೋದ್ಯಮ ಕೇಂದ್ರವಾಗಿ ಗೋಳಗುಮ್ಮಟವನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಬಿಜಾಪುರ ನಗರದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿಂದ ಮತ್ತು ಪ್ರವಾಸೋದ್ಯಮ ಇಲಾಖೆಯ ನಿರ್ಲಕ್ಷದಿಂದಾಗಿ ಪ್ರವಾಸಿಗರಿಗೆ

ಸರಿಯಾದ ಮಾರ್ಗದರ್ಶನ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಪ್ರವಾಸಿಗರನ್ನು ಆಕರ್ಷಿಸಲು ಹಾಗೂ ಪ್ರವಾಸಿಗರ ಅನುಕೂಲಕ್ಕಾಗಿ ಯಾವ ಯಾವ ಉತ್ತೇಜಕ ಕ್ರಮಗಳನ್ನು ಸರ್ಕಾರ ಕೈಗೊಳ್ಳಲಾಗಿದೆ;

ಇ. ವಿಶ್ವವಿಖ್ಯಾತ ಗೋಳಗುಮ್ಮಟದ ಅಭಿವೃದ್ಧಿಗೆ ಹಾಗೂ ವಿಜಾಪುರ ನಗರದ ಸೌಂದರ್ಯದ ಅಭಿವೃದ್ಧಿಗೆ ಸರ್ಕಾರ ವಿಶೇಷ ಅನುದಾನ ಬಿಡುಗಡೆ ಮಾಡಲಾಗುವುದೇ;

ಈ. ಸರ್ಕಾರದ ವಿಶೇಷ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ಹಾಗೂ ಎಷ್ಟು ಪ್ರಮಾಣದಲ್ಲಿ ಬಿಡುಗಡೆ ಮಾಡಲಾಗುವುದು?

ಶ್ರೀ ಬಿ.ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಜವಳಿ ಸಚಿವರು)

ಅ. ಹೌದು.

ಆ. ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಪ್ರವಾಸಿಗರಿಗೆ ಸಾಕಷ್ಟು ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಬಿಜಾಪುರ ನಗರದಲ್ಲಿ ಪ್ರಮುಖ ಸ್ಮಾರಕಗಳಾದ ಜಲಮಂದಿರ, ಗಗನಮಹಲ್, ಬಾರಾಕಮಾನ, ಗೋಲಗುಮ್ಮಟ, ಇಬ್ರಾಹಿಂ ರೋಜಾ, ಜೋಡಗುಮ್ಮಟ, ಸಹಸ್ರಫಣಿ ಪಾರ್ಶ್ವನಾಥ, ಈ ಸ್ಮಾರಕಗಳ ಬಳಿ ಶೌಚಾಲಯ ಮತ್ತು ಕುಡಿಯುವ ನೀರಿನ ಸೌಲಭ್ಯವನ್ನು ಕಲ್ಪಿಸಲಾಗಿದೆ. ಪ್ರವಾಸಿಗರ ಅನುಕೂಲಕ್ಕಾಗಿ ಯಾತ್ರಿನಿವಾಸ ಪ್ರವಾಸಿ ಮಾಹಿತಿ ಕೇಂದ್ರಗಳನ್ನು ನಿರ್ಮಿಸಲಾಗಿದ್ದು, ಪ್ರಸ್ತುತ ಇವುಗಳನ್ನು ಬಿಜಾಪುರ ಮಹಿಳಾ ವಿಶ್ವವಿದ್ಯಾಲಯಕ್ಕೆ ನೀಡಲಾಗಿದೆ. ಪ್ರವಾಸಿಗರ ಅನುಕೂಲಕ್ಕಾಗಿ ಮಾರ್ಗಸೂಚಿ ಫಲಕಗಳನ್ನು ಅಳವಡಿಸಲಾಗಿದೆ. ನಿರುದ್ಯೋಗಿ ಯುವಕರಿಗೆ ಮಾರ್ಗದರ್ಶನ ತರಬೇತಿ ನೀಡಿ ಮಾರ್ಗದರ್ಶಿ ಪರವಾನಗಿ ಪತ್ರ ನೀಡಲಾಗಿದೆ. 2005–06ನೇ ಸಾಲಿನಲ್ಲಿ ಬಿಜಾಪುರ ನವರಸಪುರ ಉತ್ಸವ ಆಚರಣೆಗಾಗಿ ರೂ.5.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಇ. 2005–06ನೇ ಸಾಲಿನಲ್ಲಿ ಬಿಜಾಪುರ, ಬೀದರ್, ಗುಲ್ಬರ್ಗಾ, ಪ್ರವಾಸಿ ಸರ್ಕ್ಯೂಟ್ ಅಭಿವೃದ್ಧಿಗಾಗಿ 8.00ಕೋಟಿ ರೂ.ಗಳ ಪ್ರಸ್ತಾವನೆಯನ್ನು ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯಕ್ಕೆ ಕಳುಹಿಸಲಾಗಿದೆ.

ಈ. ಉದ್ಭವಿಸುವುದಿಲ್ಲ.